ಮರವಂತೆ ಕಡಲ ತೀರವನ್ನು ಪ್ರವಾಸಿ ಕೇಂದ್ರವೆಂದು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವ ದಿನಾಂಕ.....

888. ಶ್ರೀ ಜಿ.ಎಸ್. ಆಚಾರ್ (ಬೈಂದೂರು) :– ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ದಕ್ಷಿಣ ಕನ್ನಡ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ತ್ರಾಸ-ಮರವಂತೆ ಕಡಲ ತೀರವು ಚೇತೋಹಾರಿಯಾದ ಪ್ರೇಕ್ಷಣೀಯ ಸ್ಥಳವಾಗಿದ್ದು, ಅದನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯೋಜಿಸಿದೆಯೇ;

ಆ) ಹಾಗಿದ್ದಲ್ಲಿ, ಯಾವ ರೀತಿಯ ಅಭಿವೃದ್ಧಿಯನ್ನು ಎಷ್ಟು ವೆಚ್ಚದಲ್ಲಿ ಯಾವಾಗ ಮಾಡಲಾಗುವುದು?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು) –

ಅ) ಹೌದು.

ಆ) ಮರವಂತೆ ಕಡಲ ತೀರದ ಅಭಿವೃದ್ಧಿ ಯೋಜನೆಯನ್ನು ಕೇಂದ್ರ ಸರ್ಕಾರ 1991–92ನೇ ಸಾಲಿನಲ್ಲಿ ಯೋಜನೆಗಳ ಅದ್ಯತೆ ಪಟ್ಟಿಯಲ್ಲಿ ಸೇರಿಸಿದೆ. ಪ್ರವಾಸೋದ್ಯಮ ಇಲಾಖೆ ನಕ್ಷೆ ಮತ್ತು ರೂ.49.69 ಲಕ್ಷದ ಅಂದಾಜು ಪಟ್ಟಿಯನ್ನು ತಯಾರಿಸಿ ಕೇಂದ್ರದ ಮಂಜೂರಾತಿಗಾಗಿ ಸಲ್ಲಿಸಿದೆ.

ಹಗಲಹಳ್ಳಿ ಬಳಿ ಸೇತುವೆ ನಿರ್ಮಾಣ

1021. ಶ್ರೀ ಬಿ.ಆರ್. ಗುರುದೇವ್ (ಸಕಲೇಶಪುರ) :– ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

1) ಸಕಲೇಶಪುರ - ಮೂಡಿಗೆರೆ ರಸ್ತೆಯಲ್ಲಿ ಹಗಲಹಳ್ಳಿ ಬಳಿ ಇರುವ ಸೇತುವೆಯು ಸಕಲೇಶಪುರದಿಂದ ಚಿಕ್ಕಮಗಳೂರಿಗೆ ಸಂಪರ್ಕ ಕಲ್ಪಿಸುವ ಬಹು ಮುಖ್ಯ ರಸ್ತೆಯಾಗಿದ್ದು ಹಾಲಿ ಸೇತುವೆಯು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಹಾಗಿದ್ದಲ್ಲಿ ಆ ಬಗ್ಗೆ ಕೈಗೊಂಡಿರುವ ಕ್ರಮಗಳೇನು;

3) ಈ ಸೇತುವೆಯ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಜಿ.ಹೆಚ್. ಅಶ್ವತ್ಥ್ ರೆಡ್ಡಿ (ಲೋಕೋಪಯೋಗಿ ಸಚಿವರು) :–

1) ಬಂದಿದೆ.

2) ಈ ಕಾಮಗಾರಿಯನ್ನು 1992–93ನೇ ಸಾಲಿನ ಆಯವ್ಯಯದಲ್ಲಿ ಸೇರಿಸಲು ಕ್ರಮ ತೆಗೆದುಕೊಳ್ಳಲಾಗುವುದು.

3) ಈ ಕಾಮಗಾರಿಯನ್ನು 1992–93ನೇ ಸಾಲಿನ ಆಯವ್ಯಯದಲ್ಲಿ ಸೇರ್ಪಡೆಯಾದರೆ, ಅದೇ ವರ್ಷದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಜಮ್ಮನಹಳ್ಳಿ ಬಳಿ ಇರುವ ಸೇತುವೆ ನಿರ್ಮಾಣ

1020. ಶ್ರೀ ಬಿ.ಆರ್. ಗುರುದೇವ್ (ಸಕಲೇಶಪುರ) :– ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

1) ಸಕಲೇಶಪುರ- ಕೂಡ್ಲಿಪೇಟೆ ರಸ್ತೆಯಲ್ಲಿ ಜಮ್ಮನಹಳ್ಳಿ ಬಳಿ ಇರುವ ಸೇತುವೆಯು ಸಕಲೇಶಪುರದಿಂದ ಕೊಡಗಿಗೆ ಸಂಪರ್ಕ ಕಲ್ಪಿಸುವ ಬಹು ಮುಖ್ಯವಾದ ರಸ್ತೆಯಾಗಿದ್ದು, ಹಾಲಿ ಸೇತುವೆಯು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;